17.5 ಮತದಾರರನ್ನು ಗುರುತಿಸಲು ಅವರು ನೀಡಬೇಕಾದ ಗುರುತಿನ ದಾಖಲೆ

ಮತದಾರರು ಮತದಾನ ಮಾಡುವಾಗ ಭಾರತ ಚುನಾವಣಾ ಆಯೋಗವು ನೀಡಿರುವ ಮತದಾರರ ಭಾವಚಿತ್ರದ ಗುರುತಿನ ಚೀಟಿ ಅಥವಾ ಈ ಕೆಳಕಂಡ 22 ದಾಖಲೆಗಳ ಪೈಕಿ ಯಾವುದಾದರೂ ಒಂದನ್ನು ಹಾಜರುಪಡಿಸುವುದನ್ನು ಕಡ್ಡಾಯ ಮಾಡಲಾಗಿದೆ. ಮತಪತ್ರವನ್ನು ಮತದಾರರಿಗೆ ನೀಡುವ ಮುನ್ನ ಅವರು ತಮ್ಮ ಗುರುತನ್ನು ಸಾಬೀತುಪಡಿಸತಕ್ಕದ್ದು.

ಕುಟುಂಬದ ಮುಖ್ಯಸ್ಥರ ಹೆಸರಿನಲ್ಲಿ ನೀಡಲಾಗಿರುವ ಈ ಕೆಳಕಂಡ 22 ದಾಖಲೆಗಳ ಪೈಕಿ ಯಾವುದಾದರೊಂದು ದಾಖಲೆಯನ್ನು ಆ ಕುಟುಂಬದ ಇನ್ನಿತರ ಸದಸ್ಯರ ಗುರುತಿಗಾಗಿ ಬಳಸಬಹುದು.

1. ಪಾಸ್‌ಪೋರ್ಟ್
2. ಡ್ರೈವಿಂಗ್ ಲೈಸನ್ಸ್
3. ಆದಾಯ ತೆರಿಗೆ ಗುರುತಿನ ಚೀಟಿ (PAN)
4. ರಾಜ್ಯ/ ಕೇಂದ್ರ ಸರ್ಕಾರ ಹಾಗೂ ಸಾರ್ವಜನಿಕ ಉದ್ದಿಮೆಗಳು ಅಥವಾ ಇತರೆ ಖಾಸಗಿ ಔದ್ಯಮಿಕ ಸಂಸ್ಥೆಗಳು ಅವರ ಕೆಲಸಗಾರರಿಗೆ ನೀಡಿರುವ ಭಾವಚಿತ್ರವಿರುವ ಸೇವಾ ಗುರುತಿನ ಚೀಟಿಗಳು.
5. ಸಾರ್ವಜನಿಕ ವಲಯದ ಬ್ಯಾಂಕ್/ ಕಿಸಾನ್ ಮತ್ತು ಅಂಚೆ ಕಛೇರಿ ನೀಡಿರುವ ಭಾವಚಿತ್ರವಿರುವ ಪಾಸ್ ಪುಸ್ತಕ.
6. ಮಾನ್ಯತೆ ಪಡೆದ ನೋಂದಾಯಿತ ವಿದ್ಯಾ ಸಂಸ್ಥೆಗಳು ವಿದ್ಯಾರ್ಥಿಗಳಿಗೆ ಕೊಟ್ಟಿರುವ ಗುರುತಿನ ಚೀಟಿಗಳು.
7. ಭಾವಚಿತ್ರವಿರುವ ನೋಂದಾಯಿತ ಡೀಡ್‌ಗಳು/ ಪಟ್ಟಾಗಳು ಮುಂತಾದ ಆಸ್ತಿ ದಾಖಲೆಗಳು.
8. ಭಾವಚಿತ್ರವಿರುವ ಪಡಿತರ ಚೀಟಿಗಳು (Ration Card)
9. ಸಕ್ಷಮ ಪ್ರಾಧಿಕಾರ ನೀಡಿರುವ SC/ ST/ OBC ಭಾವಚಿತ್ರವಿರುವ ಪ್ರಮಾಣ ಪತ್ರಗಳು.
10. ಸಕ್ಷಮ ಪ್ರಾಧಿಕಾರ ನೀಡಿರುವ ಭಾವಚಿತ್ರವಿರುವ ಪಿಂಚಣಿ ಪಾವತಿ ಆದೇಶಗಳು ಅಥವಾ ಮಾಜಿ ಯೋಧರ ಪಿಂಚಣಿ ಪುಸ್ತಕ/ ಪಿಂಚಣಿ ಸಂದಾಯ ಆದೇಶಗಳಂತಹ ಪಿಂಚಣಿ ದಾಖಲೆಗಳು, ವೃದ್ಧಾಪ್ಯ ವೇತನ ಆದೇಶಗಳು, ವಿಧವಾ ವೇತನ ಆದೇಶಗಳು.
11. ಭಾವಚಿತ್ರವಿರುವ ಸ್ವಾತಂತ್ರ್ಯ ಯೋಧರ ಗುರುತಿನ ಚೀಟಿಗಳು
12. ಸಕ್ಷಮ ಪ್ರಾಧಿಕಾರ ನೀಡಿರುವ ಭಾವಚಿತ್ರವಿರುವ ಶಸ್ತ್ರ ಪರವಾನಗಿ.
13. ಅಂಗವಿಕಲರಿಗೆ ಸಕ್ಷಮ ಪ್ರಾಧಿಕಾರ ನೀಡಿರುವ ಭಾವಚಿತ್ರವಿರುವ ಗುರುತಿನ ಚೀಟಿಗಳು.
14. ಮಾಜಿ ಯೋಧರ ಭಾವಚಿತ್ರವಿರುವ ಸಿ.ಎಸ್.ಡಿ. ಕ್ಯಾಂಟೀನ್ ಕಾರ್ಡ್.
15. ಸಂಧ್ಯಾ ಸುರಕ್ಷಾ ಯೋಜನೆಯ ಭಾವಚಿತ್ರವಿರುವ ಗುರುತಿನ ಚೀಟಿ.
16. NREG ಯೋಜನೆಯ ಅಡಿಯಲ್ಲಿ ನೀಡಿರುವ ಭಾವಚಿತ್ರವಿರುವ ಉದ್ಯೋಗ ಕಾರ್ಡ್.
17. ಭಾವಚಿತ್ರವಿರುವ ಯಶಸ್ವಿನಿ ಕಾರ್ಡ್.
18. ಮಹಾನಗರ ಪಾಲಿಕೆ, ನಗರಸಭೆ, ಪುರಸಭೆ, ಗ್ರಾಮ ಪಂಚಾಯತಿಗಳು ಇತ್ಯಾದಿ ಸ್ಥಳೀಯ ಸಂಸ್ಥೆಗಳು ನೀಡಿರುವ ಭಾವಚಿತ್ರವಿರುವ ಸೇವಾ ಗುರುತಿನ ಚೀಟಿಗಳು
19. ಸರ್ಕಾರಿ ಇಲಾಖೆ ನೀಡಿರುವ ಭಾವಚಿತ್ರವಿರುವ ಹಿರಿಯ ನಾಗರಿಕರ ಗುರುತಿನ ಚೀಟಿ.
20. ಕರ್ನಾಟಕ ಸರ್ಕಾರದ ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆಯು ನೀಡಿರುವ ಕುಟುಂಬದ ಸದಸ್ಯರ ಹೆಸರು ಮತ್ತು ವಯಸ್ಸು ಹಾಗೂ ಕುಟುಂಬದ ಯಜಮಾನನೊಂದಿಗೆ ಹೊಂದಿರುವ ಸದಸ್ಯರ ಸಂಬಂಧ ಒಳಗೊಂಡ ಭಾವಚಿತ್ರ ಇರುವ ತಾತ್ಕಾಲಿಕ/ಮೂಲ ಪಡಿತರ ಚೀಟಿ.
21. ಭಾವಚಿತ್ರವಿರುವ ಆರೋಗ್ಯ ವಿಮಾ ಯೋಜನೆ ಸ್ಮಾರ್ಟ್ ಕಾರ್ಡ್‌ಗಳು (ಕಾರ್ಮಿಕ ಮಂತ್ರಾಲಯ ಯೋಜನೆ)
22. ಆಧಾರ ಕಾರ್ಡ್